ಸ್ಮಾರ್ಟ್ ಸಿಟಿ ವತಿಯಿಂದ ಕೈಗೆತ್ತಿಕೊಳ್ಳುತ್ತಿರುವ ಕೆ.ಆರ್.ಮಾರುಕಟ್ಟೆ ಹಾಗೂ ಹಲವು ಅಭಿವೃದ್ಧಿ ಕಾಮಗಾರಿಯನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸಲು ಸೂಚನೆ: ಆಡಳಿತಗಾರರು ಗೌರವ್ ಗುಪ್ತಾ.

ನಗರದ ಕೆ.ಆರ್.ಮಾರುಕಟ್ಟೆ ಹಾಗೂ ಸುತ್ತಮುತ್ತಲು ಬೆಂಗಳೂರು ಸ್ಮಾರ್ಟ್ ಸಿಟಿ ಲಿ. ವತಿಯಿಂದ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದ್ದು, ಕಾಮಗಾರಿಗಳನ್ನು ಸಮನ್ವಯತೆಯಿಂದ ನಿಗಧಿತ ಸಮಯದಲ್ಲಿ ಪೂರ್ಣಗೊಳಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಆಡಳಿತಗಾರರು ಗೌರವ್ ಗುಪ್ತಾ ರವರು ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯ ಕೆ.ಆರ್.ಮಾರುಕಟ್ಟೆ ಹಾಗೂ ಸುತ್ತಮುತ್ತಲು ಸ್ಮಾರ್ಟ್‌ಸಿಟಿ ವತಿಯಿಂದ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಸಂಬಂಧ ಇಂದು ಆಡಳಿತಗಾರರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಗರದ ಕೆ.ಆರ್.ಮಾರುಕಟ್ಟೆ, ಮಾಂಸದ ಮಾರುಕಟ್ಟೆ, ಜಂಕ್ಷನ್ ಅಭಿವೃದ್ಧಿ, ಬಸ್ ಟರ್ಮಿನಲ್ (ಬಸ್ ನಿಲುಗಡೆ ಸ್ಥಳ) ಹಾಗೂ ಸಬ್ ವೇ(ಪಾದಚಾರಿ ಸುರಂಗಮಾರ್ಗ) ಕಾಮಗಾರಿಗಳನ್ನು ಸ್ಮಾರ್ಟ್ ಸಿಟಿ ವತಿಯಿಂದ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಸಂಬಂಧ ಸ್ಮಾರ್ಟ್ ಸಿಟಿ, ಬಿಬಿಎಂಪಿ, ಬೆಸ್ಕಾಂ, ಜಲಮಂಡಳಿ, ಟ್ರಾಫಿಕ್ ಪೊಲೀಸ್ ಇಲಾಖೆ, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ವರ್ತಕರ ಸಹಕಾರದೊಂದಿಗೆ ಈ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕಿದೆ. ಕಾಮಗಾರಿಗಳನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಬೇಕಾದರೆ ಸಮನ್ವಯತೆ ಹಾಗೂ ಸ್ಥಳೀಯರ ಸಹಕಾರ ಬಹಳ ಪ್ರಾಮುಖ್ಯ. ಈ ನಿಟ್ಟಿನಲ್ಲಿ ಹಂತ-ಹಂತವಾಗಿ ಕಾಮಗಾರಿಗಳ್ಳು ಕೈಗೆತ್ತಿಕೊಂಡು ಕಾಲಮಿತಿಯೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಯೋಜನೆ ರೂಪಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕೆ.ಆರ್. ಮಾರುಕಟ್ಟೆ ಕಟ್ಟಡವನ್ನು ಸುಮಾರು 34 ಕೋಟಿ ರೂ. ವೆಚ್ಚದಲ್ಲಿ ನವೀಕರಣ ಮಾಡಲು ಯೋಜನೆ ರೂಪಿಸಲಾಗಿದ್ದು, ಅದರ ನೀಲ ನಕ್ಷೆಯನ್ನು ಕೂಡಾ ಸಿದ್ಧಪಡಿಸಲಾಗಿದೆ. ಇರುವ ಕಟ್ಟಡವನ್ನು ಸುಸಜ್ಜಿತ ಕಟ್ಟಡವನ್ನಾಗಿ ಪರಿವರ್ತಿಸಿ ಸಮರ್ಪಕ ಪಾರ್ಕಿಂಗ್ ವ್ಯವಸ್ಥೆ, ಸುಗಮವಾಗಿ ಮಹಡಿಯ ಮೇಲ್ಲೋಗಲು ರ್ಯಾಂಪ್ ಹಾಗೂ ಲಿಫ್ಟ್ ಅಳವಡಿಕೆ ಸೇರಿದಂತೆ ಇನ್ನಿತರೆ ಅಭಿವೃದ್ಧಿ ಕಾರ್ಯಗಳನ್ನು ಕೈಗೆತ್ತಿಕೊಳ್ಳಾಗುತ್ತದೆ. ಇನ್ನು ಮಾಂಸ ಮಾರುಕಟ್ಟೆಯ ಸ್ಥಳದಲ್ಲಿರುವ ಮೂರು ಕಟ್ಟಡ(ಬ್ಲಾಕ್)ಗಳ್ಳು ತೆರವುಗೊಳಿಸಿ 14 ಕೋಟಿ ರೂ. ವೆಚ್ಚದಲ್ಲಿ ನೆಲ ಮಹಡಿಯಲ್ಲಿ ಪಾರ್ಕಿಂಗ್ ವ್ಯವಸ್ಥೆ ಹಾಗೂ ಮಾಂಸ ಮಾರಾಟ ಮಾಡಲು ವ್ಯವಸ್ಥಿತ ಕಟ್ಟಡ ನಿರ್ಮಾಣಕ್ಕೆ ಸ್ಮಾರ್ಟ್ ಸಿಟಿಯು ಯೋಜನೆ ರೂಪಿಸಿಕೊಂಡಿದೆ. ಅದಲ್ಲದೆ 17 ಕೋಟಿ ರೂ. ವೆಚ್ಚದಲ್ಲಿ ಕೆ.ಆರ್ ಮಾರುಕಟ್ಟೆ ಜಂಕ್ಷನ್ ಅಭಿವೃದ್ಧಿ, ಬಸ್ ಟರ್ಮಿನಲ್(ಬಸ್ ನಿಲುಗಡೆ ಸ್ಥಳ) ಹಾಗೂ ಸಬ್ ವೇ(ಪಾದಚಾರಿ ಸುರಂಗಮಾರ್ಗ)ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಎಲ್ಲಾ ಕಾಮಗಾರಿಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಎಲ್ಲಾ ಪೂರ್ವಸಿದ್ಧತೆ ಮಾಡಿಕೊಳ್ಳಲು ಸೂಚನೆ ನೀಡಲಾಗಿದೆ ಎಂದರು.

ಕಾರ್ಯಪಾಲಕ ಅಭಿಯಂತರರು ಚಂದ್ರಶೇಖರ್ ಮಾತನಾಡಿ, ಸ್ಮಾರ್ಟ್ ಸಿಟಿ ವತಿಯಿಂದ ಬಸ್ ಟರ್ಮಿನಲ್, ಸಬ್ ವೇ, ಜಂಕ್ಷನ್ ಸೇರಿ ಹಂತಗಳಲ್ಲಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಈಗಾಗಲೇ ಬಸ್ ಟರ್ಮಿನಲ್(ಬಸ್ ನಿಲುಗಡೆ ಸ್ಥಳ ಅಭಿವೃದ್ಧಿ)ನ ಕಾಮಗಾರಿಯನ್ನು

ಪ್ರಾರಂಭಿಸಲಾಗಿದೆ. ಒಂದು ಭಾಗದಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿ ಎರಡು ತಿಂಗಳಲ್ಲಿ ಪೂರ್ಣಗೊಳಿಸಿ ಮತ್ತೊಂದು ಭಾಗದ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತದೆ. ಸಬ್ ವೇ(ಪಾದಚಾರಿ ಸುರಂಗಮಾರ್ಗ)ಯಲ್ಲಿ ಆರು ಮಾರ್ಗಗಳಿದ್ದು, ಅದನ್ನು ಕೂಡಾ ತ್ವರಿತವಾಗಿ ಕೈಗೆತ್ತಿಕೊಳ್ಳಲಾಗುತ್ತದೆ. ಸಬ್ ವೇಯಲ್ಲಿ ಇದೇ ಮೊದಲಬಾರಿಗೆ ಎಸ್ಕಲೇಟರ್ ಅಳವಡಿಸಲಾಗುತ್ತಿದ್ದು, ಪಾದಚಾರಿಗಳ ಸುಗಮ ಸಂಚಾರಕ್ಕಾಗಿ ಎಲ್.ಇ.ಡಿ ದೀಪಗಳ ಅಳವಡಿಕೆ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಸುಂದರೀಕರಣ ಮಾಡಲು ಯೋಜನೆ ರೂಪಿಸಲಾಗಿದೆ. ಸಂಚಾರ ದಟ್ಟಣೆ ಕಡಿಮೆ ಮಾಡುವ, ಪಾದಚಾರಿಗಳ ಸುಗಮ ಸಂಚಾರಕ್ಕೆ ಅನುಗುಣವಾಗುವಂತೆ ಜಂಕ್ಷನ್ ಅಭಿವೃದ್ಧಿಗೊಳಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.

ಪರಿಶೀಲನೆ ವೇಳೆ ಸ್ಮಾರ್ಟ್ ಸಿಟಿ ವ್ಯವಸ್ಥಾಪಕ ನಿರ್ದೇಶಕರು ರಾಜೇಂದ್ರ ಚೋಳನ್, ಪಶ್ಚಿಮ ವಲಯ ವಿಶೇಷ ಆಯುಕ್ತರು ಬಸವರಾಜು, ಪಶ್ಚಿಮ ವಲಯ ಜಂಟಿ ಆಯುಕ್ತರು  ಶಿವಸ್ವಾಮಿ, ಸ್ಮಾರ್ಟ್ ಸಿಟಿ ಮುಖ್ಯ ಅಭಿಯಂತರರು ರಂಗನಾಥ ನಾಯ್ಕ್, ಉಪ ಆಯುಕ್ತರು(ಮಾರುಕಟ್ಟೆ) ಹೇಮಂತ್ ಹಾಗೂ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.